# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY, RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

4

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಸಭೆಯ ಸಮಿತಿಗಳು

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ವಾಣಿ  ದಿನಾಂಕ : DATE : 11/11/20

# ಸ್ಥಾಯಿ ಸಮಿತಿಗಳಿಗೆ ನೇಮಕ

11/11/20

ಬೆಂಗಳೂರು: ರಾಜ್ಯ ವಿಧಾನ ಮಂಡಲ ಹಾಗೂ ವಿಧಾನಸಭೆ ವಿವಿಧ ಸ್ಥಾಯಿ ಸಮಿತಿಗಳಿಗೆ 2020-21ನೇ ಸಾಲಿಗಾಗಿ ಸದಸ್ಯರು ಮತ್ತು ಅಧ್ಯಕ್ಷರನ್ನು ನೇಮಿಸಿ ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಆದೇಶ ಹೊರಡಿಸಿದ್ದಾರೆ.

ರಾಮಲಿಂಗಾರೆಡ್ಡಿ ವಿಧಾನ ಮಂಡಲದ ಸಾರ್ವಜನಿಕ ಲೆಕ್ಕಪತ್ರ ಸಮಿತಿ ಅಧ್ಯಕ್ಷರಾಗಿದ್ದರೆ, ಅರವಿಂದ ಲಿಂಬಾವಳಿಗೆ ಸಾರ್ವಜನಿಕ ಉದ್ದಿಮೆಗಳ ಸಮಿತಿ ಹೊಣೆಗಾರಿಕೆ ನೀಡಲಾಗಿದೆ. ಅನುಸೂಚಿತ ಜಾತಿ ಮತ್ತು ಪಂಗಡಗಳ ಕಲ್ಯಾಣ ಸಮಿತಿಗೆ ಎಸ್. ಅಂಗಾರ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿಗೆ ದಿನಕರ್ ಕೇಶವಶೆಟ್ಟಿ, ಅಧೀನ ಶಾಸನ ರಚನಾ ಸಮಿತಿಗೆ ಕುಮಾರ್ ಬಂಗಾರಪ್ಪ, ಸಭೆಯ ಮುಂದಿಡಲಾಗದ ಕಾಗದಪತ್ರಗಳ ಸಮಿತಿಗೆ ಸಾ.ರಾ. ಮಹೇಶ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿಗೆ ಪೂರ್ಣಿಮಾ, ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್‌ರಾಜ್ ಸಂಸ್ಥೆಗಳ ಸಮಿತಿಗೆ ಸೋಮಶೇಖರ್ ರೆಡ್ಡಿ ಅಧ್ಯಕ್ಷರಾಗಿದ್ದಾರೆ. ವಿಧಾನಸಭೆ ಹಕ್ಕುಬಾಧ್ಯತೆಗಳ ಸಮಿತಿಗೆ ಬಸನಗೌಡ ಪಾಟೀಲ್ ಯತ್ನಾಳ್, ಖಾಸಗಿ ಸದಸ್ಯರುಗಳ ವಿಧೇಯಕ ಹಾಗೂ ನಿರ್ಣಯಗಳ ಸಮಿತಿ, ಅರ್ಜಿಗಳ ಸಮಿತಿ ಮತ್ತು ವಸತಿ ಸೌಕರ್ಯ ಸಮಿತಿಗೆ ವಿಧಾನಸಭೆ ಉಪಾಧ್ಯಕ್ಷ ಆನಂದ್ ಅಲಿಯಾಸ್ ವಿಶ್ವನಾಥ್ ಚಂದ್ರಶೇಖರ ಮಾಮನಿ ಅಧ್ಯಕ್ಷರಾಗಿದ್ದಾರೆ.

» **ವಿಧಾನಸಭಾಧ್ಯಕ್ಷ ಕಾಗೇರಿ ಆದೇಶ**